# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 345(2460)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ವಿಷಯ : ಕೆ.ಐ.ಎ.ಡಿ.ಬಿ. ವತಿಯಿಂದ ನಿರ್ಮಾಣಗೊಂಡ ಕೈಗಾರಿಕೆ ಪ್ರದೇಶಗಳ ಕುರಿತು

(ಅ) ರಾಜ್ಯದಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ನಿರ್ಮಾಣಗೊಂಡ ಕೈಗಾರಿಕಾ ಪ್ರದೇಶಗಳ ಸಂಖ್ಯೆ ಎಷ್ಟು; ಪ್ರತಿ ಕೈಗಾರಿಕಾ ಪ್ರದೇಶಗಳಲ್ಲಿ ನಿರ್ಮಾಣಗೊಂಡ ಜಮೀನುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ನಿರ್ಮಾಣಗೊಂಡ ಕೈಗಾರಿಕಾ ಪ್ರದೇಶಗಳಲ್ಲಿ ಮೂಲಸೌಕರ್ಯಗಳ ಕೊರತೆ ನೀಗಿಸಲು ಸರ್ಕಾರದ ನಿರುತ್ಸಾಹಕ್ಕೆ ಕಾರಣಗಳೇನು; (ವಿವರ ನೀಡುವುದು)

(ಇ) ಮೂಲಸೌಕರ್ಯಗಳ ಕೊರತೆ ಹಿನ್ನಲೆಯಲ್ಲಿ ಹಲವು ಕೈಗಾರಿಕಾ ಪ್ರದೇಶಗಳಲ್ಲಿ ಸಮರ್ಪಕವಾಗಿ ಜಮೀನುಗಳು ಹಂಚಿಕೆಯಾಗದೇ ಉಳಿಕೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಈ) ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಸ್ಥಾಪಿತವಾಗಿರುವ ಉದ್ದಿಮೆಗಳ ಸಂಖ್ಯೆ ಎಷ್ಟು ; ಸದರಿ ಉದ್ದಿಮೆಗಳಲ್ಲಿ ಕಾರ್ಯ ನಿರ್ವಹಿಸುವ ಉದ್ಯೋಗಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)